RNU AIR DHARWAD

**APRIL 13,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ರಾಜ್ಯದಲ್ಲಿ ಹಾಲಿನ ದರ ಏರಿಕೆಯಿಂದ ಹೈನುಗಾರರಿಗೆ ಹೆಚ್ಚಿನ ಪ್ರಯೋಜನವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಹಾಲಿನ ದರ ಏರಿಕೆಯಿಂದ ಸರ್ಕಾರದ ಖಜಾನೆಗೆ ಹಣ ಬರುವುದಿಲ್ಲ, ಬದಲಾಗಿ ರೈತರ ಖಾತೆಗೆ ಹಣ ವರ್ಗಾವಣೆಯಾಗಿ ಅವರಿಗೆ ಹೆಚ್ಚಿನ ಪ್ರಯೋಜನವಾಗುತ್ತಿದೆ ಎಂದರು. ರಾಜ್ಯದಲ್ಲಿ ಅನುಷ್ಠಾನಕ್ಕೆ ತಂದಿರುವ ಜಾತಿಗಣತಿಯ ಬಗ್ಗೆ ಮಾತನಾಡಿದ ಅವರು ಸರ್ಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಸದುದ್ದೇಶದಿಂದ ಜಾತಿಗಣತಿ ನಡೆಸಲಾಗಿದೆ ಎಂದರು.

<><><>

ಧ್ವನಿ: ಸಿ.ಎಂ ಸಿದ್ದರಾಮಯ್ಯ 35 ಸೆಕೆಂಡುಗಳು

<><><>

ಸಂವಿಧಾನ ಶಿಲ್ಪಿ ಡಾಕ್ಟರ್ ಬಿ.ಆರ್ ಅಂಬೇಡ್ಕರ್ ಅವರ ಜಯಂತಿ ಹಿನ್ನೆಲೆ ರಾಜ್ಯಾದ್ಯಂತ ಇಂದು ಮತ್ತು ನಾಳೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. 1925 ರ ಏಪ್ರಿಲ್ 10 ಹಾಗೂ 11 ರಂದು ಬೆಳಗಾವಿಯ ನಿಪ್ಪಾಣಿಗೆ ತಲುಪಿದ್ದ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಗಮನಕ್ಕೆ 100 ವರ್ಷ ತುಂಬಿದ ಹಿನ್ನೆಲೆಯಲ್ಲಿ, ಇಂದು ಹುಬ್ಬಳ್ಳಿಯಲ್ಲಿ ಭೀಮ ಹೆಜ್ಜೆ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು ಭೀಮ ಹೆಜ್ಜೆಗೆ ಶತಮಾನದ ಸಂಭ್ರಮವಾಗಿದ್ದು, ರಾಜ್ಯದ ವಿವಿಧೆಡೆಗಳಲ್ಲಿ ಐದು ದಿನಗಳ ಕಾಲ ಜನ ಜಾಗೃತಿ ಕಾರ್ಯಕ್ರಮಗಳು ಜರುಗುತ್ತಿವೆ ಎಂದಿದ್ದಾರೆ.

<><><>

ಪ್ರಾಚೀನ ಬನವಾಸಿಯು ಬಹು ಸಂಸ್ಕೃತಿಯ ತಾಣ ಹಾಗೂ ಧರ್ಮದ ನೆಲೆಯಾಗಿದೆ. ಕವಿ ಪಂಪನ ಹೆಸರು ಶಾಸ್ವತವಾಗಿ ಉಳಿಯುವಂತಾಗಲು ಬನವಾಸಿಯಲ್ಲಿ, ಪಂಪ ಭವನ ನಿರ್ಮಾಣವಾಗಬೇಕು ಎಂದು ಸಾಹಿತಿ ಡಾಕ್ಟರ್ ಬಿ.ಎ ವಿವೇಕ ರೈ ಅಭಿಪ್ರಾಯಪಟ್ಟರು. ಉತ್ತರ ಕನ್ನಡ ಜಿಲ್ಲೆ ಶಿರಸಿಯ ಬನವಾಸಿಯಲ್ಲಿ ಜರುಗಿದ ಕದಂಬೋತ್ಸವ–2025 ಕಾರ್ಯಕ್ರಮದಲ್ಲಿ

ಪಂಪ ಪ್ರಶಸ್ತಿ ಸ್ವೀಕರಿಸಿ ಅವರು ಮಾತನಾಡಿದರು. ಪಂಪ ಭವನದಲ್ಲಿ ಪಂಪನ ಕಾವ್ಯ, ಕೃತಿಗಳು ಹಾಗೂ ಪಂಪನ ಕುರಿತ ಸಂಶೋಧನಾ ಗ್ರಂಥಗಳನ್ನಿಡಬೇಕು ಎಂದರು.

<><><>

ಕನ್ನಡದ ಪ್ರಥಮ ಕವಯತ್ರಿ, 12 ನೇ ಶತಮಾನದ ಪ್ರಮುಖ ವಚನಗಾರ್ತಿ ಅಕ್ಕಮಹಾದೇವಿ ಅವರ ಜೀವನ ಸಂದೇಶಗಳು ಸಾರ್ವತ್ರಿಕ ಹಾಗೂ ಸಾರ್ವಕಾಲಿಕವಾಗಿದ್ದು, ಸಮಾಜಕ್ಕೆ ದಾರಿದೀಪವಾಗಿವೆ ಎಂದು ಬೀದರ್ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸುರೇಖಾ ಕೆ.ಎ.ಎಸ್ ಹೇಳಿದರು. ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಅಕ್ಕ ಮಹಾದೇವಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಗೌರವಯುತ, ಆರೋಗ್ಯಕರ ಜೀವನಕ್ಕಾಗಿ ಅಕ್ಕಮಹಾದೇವಿಯವರು ನೀಡಿದ ಸಂದೇಶಗಳು ಮಾರ್ಗದರ್ಶಿಯಾಗಿವೆ ಎಂದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ 16 ರಂದು, ಬೀದರಗೆ ಬೇಟಿ ನೀಡಿ, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಒಟ್ಟು 48 ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ಹೊಸ ಜಿಲ್ಲಾಡಳಿತ ಭವನ –ಪ್ರಜಾಸೌಧ ನಿರ್ಮಾಣವಾಗಲಿದೆ. ಇದು ರಾಜ್ಯ ಸರ್ಕಾರದ ಬದ್ಧತೆ ಹಾಗೂ ಪ್ರಗತಿಪರ ದೃಷ್ಠಿಕೋನದ ಪ್ರತೀಕವಾಗಿದೆ ಎಂದಿದ್ದಾರೆ.

<><><>

ಯಾದಗಿರಿ ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಸದಾ ಮುಂಚೂಣಿಯಲ್ಲಿದ್ದು ಸಾರ್ವಜನಿಕರ ಸಹಕಾರವೂ ಅಗತ್ಯ. ಕಾನೂನು ಬಾಹಿರವಾಗಿ ನಡೆಯುವ ಯಾವುದೇ ಚಟುವಟಿಕೆ ಬಗ್ಗೆ ಮಾಹಿತಿ ಒದಗಿಸಿದಲ್ಲಿ ಮಾಹಿತಿದಾರರ ಕುರಿತು ಗೌಪ್ಯತೆ ಕಾಪಾಡುವ ಜೊತೆಯಲ್ಲಿ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿ ಠಾಧಿಕಾರಿ ಪೃಥ್ವಿಕ್ ಶಂಕರ್ ಹೇಳಿದ್ದಾರೆ.

<><><>

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಬೀದರ್ ಜಿಲ್ಲೆಯು ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಮೊದಲ ಸ್ಥಾನ ಪಡೆದುಕೊಂಡಿದೆ. ಈ ಹಿನ್ನೆಲೆಯಲ್ಲಿ ಬೀದರ್ ಜಿಲ್ಲಾ ಡಿಡಿಪಿಯು ಚಂದ್ರಕಾಂತ ಶಾಹಾಬಾದಕರ್ ಅವರನ್ನು ನಗರದ ಆರ್.ಆರ್.ಕೆ ಪದವಿ ಪೂರ್ವ ಕಾಲೇಜಿನಲ್ಲಿ ಜರುಗಿದ ಪ್ರಾಚಾರ್ಯರ ಸಭೆಯಲ್ಲಿ ಗೌರವಿಸಲಾಯಿತು.

<><><>

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ, ನಾಗಲಕ್ಷ್ಮೀ ಚೌಧರಿ, ಈ ತಿಂಗಳ 15 ರಿಂದ ಮೂರು ದಿನಗಳ ಕಾಲ, ದಾವಣಗೆರೆ ಜಿಲ್ಲೆ ಪ್ರವಾಸ ಕೈಗೊಂಡಿದ್ದಾರೆ. ಮಹಿಳೆಯರಿಂದ ಅಹವಾಲು ಸ್ವೀಕರಿಸಲಿದ್ದಾರೆ.

<><><>

ಬೆಲೆ ಏರಿಕೆ ಖಂಡಿಸಿ, ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ, ಇದೇ 17 ರಂದು ಕಾಂಗ್ರೆಸ್ ರಾಜ್ಯಾದ್ಯಂತ ಪ್ರತಿಭಟಿಸಲಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಬೆಂಗಳೂರಿನಲ್ಲಿ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>